# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ 69 ಮನೋರಾಯನಪಾಳ್ಯ**

**ಸಂಖ್ಯೆ:** ಸ.ಅ/ವಾ-69/ಪಿ.ಆರ್/07/2022-23 **ದಿನಾಂಕ:-** 04-02-2023

## ವಾರ್ಡ್ ಸಮಿತಿ ಸಭೆಯ ನಡವಳಿಗಳು

**ವಿಷಯ:** ಮಾನ್ಯ ಆಯುಕ್ತರು ಬಿ.ಬಿ.ಎಂ.ಪಿ ರವರ ಆದೇಶ ಸಂಖ್ಯೆ:ಬಿ12(5)ಪಿ.ಆರ್/35/2020-21 ದಿನಾಂಕ:-21-09-2020. ರವರ ಆದೇಶದಂತೆ ದಿನಾಂಕ:-04-02-2023 ರಂದು ವಾರ್ಡ್ ನಂ:69 ಮನೋರಾಯನಪಾಳ್ಯ ವಾರ್ಡ್ ಸಮಿತಿ ಸಭೆಯ ನಡವಳಿಗಳು.

### :: ಸಭೆಗೆ ಹಾಜರಾಗಿದ್ದವರ ವಿವರಗಳು ::

| ಕ್ರ.ಸಂ | ಹೆಸರು ಶ್ರೀಮತಿ/ಶ್ರೀ | ಪದನಾಮ |
|---|---|---|
| 1. | ಶ್ರೀ. ಅಶೋಕ್ ಹಿಂದಾ | ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು |
| 2. | ಶ್ರೀ. ಸೋಮಶೇಖರ್ ನಿಟ್ಟೂರೆ | ಸಹಾಯಕ ಅಭಿಯಂತರರು ವಾರ್ಡ್ ನಂ: 69 |
| 3. | ಶ್ರೀ. ಮೂರ್ತಿ | ಕಂದಾಯ ಇಲಾಖೆ |
| 4. | ಶ್ರೀ. ಕಿರಣ್‌ರಾಜ್ | ಬಿ.ಬಿ.ಎಂ.ಪಿ ಮಾರ್ಷಲ್ |
| 5. | ಶ್ರೀ. ಸುರೇಶ್ | ಸಾರ್ವಜನಿಕರು |
| 6. | ಶ್ರೀ. ನರಸಿಂಹ | ಸಾರ್ವಜನಿಕರು |
| 7. | ಶ್ರೀ. ಅನಂತ್ | ಸಾರ್ವಜನಿಕರು |
| 8. | ಶ್ರೀ. ಫಾರೂಕ್ | ಸಾರ್ವಜನಿಕರು |
| 9. | ಶ್ರೀ. ಅರುಣ್‌ಕುಮಾರ್ | ಸಾರ್ವಜನಿಕರು |
| 10. | ಶ್ರೀ. ಪುಟ್ಟ | ಸಾರ್ವಜನಿಕರು |

ವಾರ್ಡ್ ಸಮಿತಿಯ ಅಧ್ಯಕ್ಷರು ಹಾಗೂ ನೋಡೆಲ್ ಅಧಿಕಾರಿಯಾದ ಶ್ರೀ. ಅಶೋಕ್ ಹಿಂದಾ ಮತ್ತು ಕಾರ್ಯದರ್ಶಿ, ಸಹಾಯಕ ಅಭಿಯಂತರರಾದ ಶ್ರೀ.ಸೊಮಶೇಖರ್ ನಿಟ್ಟೂರೆ ರವರು ಸಭೆಗೆ ಹಾಜರಾಗಿದ್ದ ಎಲ್ಲರಿಗೂ ಸ್ವಾಗತ ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು. ಹಾಗೂ ಅಧ್ಯಕ್ಷರಿಗೆ ವಾರ್ಡ್ ಸಭೆ ಸಾರ್ವಜನಿಕ ಕುಂದು ಕೊರತೆಗಳ ಬಗ್ಗೆ ವಿಸ್ತಾರವಾಗಿ ಪ್ರಸ್ಥಾಪಿಸಲು ಕೋರಲಾಯಿತು.

ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು ವಾರ್ಡ್ ಸಂಖ್ಯೆ-69 ರವರು ಹಿಂದಿನ ಸಭೆಯಲ್ಲಿ ನಡೆದಂತಹ ವಿಷಯಗಳ ಹಾಗೂ ದೂರುಗಳ ಕುರಿತು ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ಕೂಲಂಕುಶವಾಗಿ ಚರ್ಚಿಸಲಾಯಿತು.

**ಬೀದಿ ದೀಪ:-**

1. ಕೆಂಪಣ್ಣ ಬಡಾವಣೆಯಲ್ಲಿ ಕೆಲವು ಬೀದಿ ದೀಪಗಳು ಸರಿಯಾಗಿ ಉರಿಯುತ್ತಿರುವುದಿಲ್ಲವೆಂದು ಸಾರ್ವಜನಿಕರು ದೂರಿದ್ದು, ಬೀದಿ ದೀಪಗಳನ್ನು ಸರಿಪಡಿಸಲಾಗಿದೆ.

**ಕಾಮಗಾರಿ ಇಲಾಖೆ:**

1. ಸನ್‌ರೈಸ್ ಕಾಲೋನಿಯಲ್ಲಿ ರಸ್ತೆಯ ಮೇಲೆ ಹರಿಯುವ ನೀರನ್ನು ರಸ್ತೆ ಪಕ್ಕದ ಚರಂಡಿಗಳಿಗೆ ಸರಾಗವಾಗಿ ಹರಿಯುವಂತೆ ಕ್ರಮಕೈಗೊಳಲಾಗಿದೆ.

**ಆರೋಗ್ಯ ಇಲಾಖೆ:**

1. ಭುವನೇಶ್ವರಿ ನಗರದಲ್ಲಿ ಸೊಳ್ಳೆ ನಿರೋಧಕ ಔಷಧಿಯನ್ನು ಸಿಂಪಡಿಸಲಾಗಿದೆ.

**ದಿನಾಂಕ:-04-02-2023 ರಂದು ನಡೆದ ವಾರ್ಡ್ ಸಮಿತಿ ಸಭೆಯಲ್ಲಿ ಚರ್ಚಿಸಲಾದ ವಿಷಯಗಳು**

**ಬೀದಿ ದೀಪ:-**

1. ಆಚಾರ್ಯ ಕಾಲೇಜು ಮುಖ್ಯರಸ್ತೆಯ ಕೆಲವು ಬೀದಿ ದೀಪಗಳು ಸರಿಯಾಗಿ ಉರಿಯುತ್ತಿರುವುದಿಲ್ಲವೆಂದು ಸಾರ್ವಜನಿಕರು ದೂರಿದ್ದು, ಅವುಗಳನ್ನು ಸರಿಪಡಿಸುವಂತೆ ಬೀದಿ ದೀಪಗಳ ನಿರ್ವಹಣೆಯ ಗುತ್ತಿಗೆದಾರರಿಗೆ ಸೂಚಿಸಲಾಯಿತು.

**ಕಾಮಗಾರಿ ಇಲಾಖೆ:**

1. ದೊಡ್ಡಮ್ಮ ಲೇಔಟ್ ಹಾಗೂ ಮನೋರಾಯನಪಾಳ್ಯ ಮುಖ್ಯರಸ್ತೆಗಳಲ್ಲಿ ರಸ್ತೆ ಪಕ್ಕದ ಚರಂಡಿಗಳ ಹೂಳನ್ನು ತೆಗೆಯುವುದು ಮತ್ತು ರಸ್ತೆ ಡಾಂಬರೀಕರಣ ಕಾಮಗಾರಿಯನ್ನು ಕೈಗೊಳ್ಳಲು ವಾರ್ಡ್ ಸಹಾಯಕ ಅಭಿಯಂತರರಿಗೆ ಸೂಚಿಸಲಾಯಿತು.
2. ಕೆಂಪಯ್ಯ ಲೇಔಟ್‌ನಲ್ಲಿ ರಸ್ತೆ ಪಕ್ಕದ ಚರಂಡಿಗಳ ಹೂಳನ್ನು ತೆಗೆಯುವುದು ಮತ್ತು ರಸ್ತೆ ಡಾಂಬರೀಕರಣ ಕಾಮಗಾರಿಯನ್ನು ಕೈಗೊಳ್ಳಲು ವಾರ್ಡ್ ಸಹಾಯಕ ಅಭಿಯಂತರರಿಗೆ ಸೂಚಿಸಲಾಯಿತು.

**ಆರೋಗ್ಯ ಇಲಾಖೆ:**

1. ಸಿ.ಐ.ಎಲ್ ಲೇಔಟ್‌ನ ರಾಜಕಾಲುವೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಸೊಳ್ಳೆ ನಿರೋಧಕ ಔಷಧಿಯನ್ನು ಸಿಂಪಡಿಸಲು ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಲಾಯಿತು.

ಮೇಲಿನ ಎಲ್ಲಾ ಅಂಶಗಳಿಗೆ ಸಂಬಂಧಪಟ್ಟಂತೆ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಚರ್ಚಿಸಿ ಸದರಿ ವಿಷಯಗಳ ಬಗ್ಗೆ ಕ್ರಮ ಕೈಗೊಳ್ಳಲು ತೀರ್ಮಾನಿಸಿ ವಂದನೆಗಳೊಂದಿಗೆ ಈ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ: 69 ಮನೋರಾಯನಪಾಳ್ಯ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ನಂ: 69 ಮನೋರಾಯನಪಾಳ್ಯ

**ಪ್ರತಿಯನ್ನು:**

1. ಕೌನ್ಸಿಲ್ ಕಾರ್ಯದರ್ಶಿ, ಬಿಬಿಎಂಪಿ ಕೇಂದ್ರ ಕಛೇರಿ, ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮಾನ್ಯ ಜಂಟಿ/ಅಪರ ಆಯುಕ್ತರು (ಪೂರ್ವ) ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ
3. ಮಾನ್ಯ ಜಂಟಿ ಆಯುಕ್ತರು (ಆರೋಗ್ಯ/ಎಸ್‌ಡಬ್ಲ್ಯೂಎಂ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ
4. ಉಪ ಆಯುಕ್ತರು (ಪೂರ್ವ), ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ
5. ಕಛೇರಿ ಕಡತಕ್ಕೆ.